**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ ಇವರು ಪ್ರಸ್ತಾಪಿಸಿರುವ ಶೂನ್ಯ ವೇಳೆ ಪ್ರಸ್ತಾವನೆಗೆ ಉತ್ತರಿಸುವ ಬಗ್ಗೆ**

ವಿಷಯ:

"ಕನಿಷ್ಟ ವೇತನ ಸಿಗದೇ ಬಿಸಿಯೂಟ ಸಿಬ್ಬಂದಿಗೆ ಸಂಕಷ್ಟ, 1.21 ಲಕ್ಷ ಬಿಸಿಯೂಟ ಸಿಬ್ಬಂದಿ ಬದುಕು ಬೀದಿಗೆ. 6 ಸಾವಿರ ರೂ ವೇತನ ಹೆಚ್ಚಿಸುವುದಾಗಿ ಹೇಳಿದ್ದ ಕಾಂಗ್ರೆಸ್" ಎಂಬ ಶೀರ್ಷಿಕೆಯಡಿ ದಿನಾಂಕ 10/07/2023 ರ ಉದಯವಾಣಿ ಪತ್ರಿಕೆಯಲ್ಲಿ ವರದಿಯಾಗಿದೆ.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಬಿಸಿಯೂಟ ಸಿದ್ಧಪಡಿಸುವ ಅಕ್ಷರ ದಾಸೋಹ ಸಿಬ್ಬಂದಿ ಕೆಲಸ ಬಿಟ್ಟು ಹಲವು ಬಾರಿ ಧರಣಿ ಕುಳಿತರೂ ಇನ್ನೂ ಕನಿಷ್ಟ ವೇತನ ಜಾರಿಯಾಗದೇ ಸಂಕಷ್ಟಕ್ಕೆ ಸಿಲುಕಿದ್ದಾರೆ.

ರಾಜ್ಯದ ಸರ್ಕಾರಿ ಶಾಲೆಗಳಲ್ಲಿರುವ 1.21 ಲಕ್ಷ ಬಿಸಿಯೂಟ ತಯಾರಕ ಸಿಬ್ಬಂದಿ ಇದೇ ವೃತ್ತಿ ನಂಬಿಕೊಂಡು ಜೀವನ ಸಾಗಿಸುತ್ತಿದ್ದಾರೆ, ಸರ್ಕಾರಿ ನೌಕರ ರೆಂದು ಪರಿಗಣಿಸಿದರೂ ಪ್ರಸ್ತುತ ನೀಡಲಾಗುತ್ತಿರುವ 3,600 ರೂ. ಮಾಸಿಕ ವೇತನದಲ್ಲಿ ಜೀವನ ನಿರ್ವಹಣೆ ಸಾಧ್ಯವಾಗದೇ ಕುಟುಂಬಗಳು ಬೀದಿಗೆ ಬಂದಿವೆ. ಅಧಿಕಾರಕ್ಕೆ ಬಂದ ಕೂಡಲೇ ಬಿಸಿಯೂಟ ತಯಾರಕರ ವೇತನ 6 ಸಾವಿರ ರೂ.ಗೆ ಹೆಚ್ಚಿಸುವುದಾಗಿ ಗ್ಯಾರಂಟಿ ಕೊಟ್ಟಿದ್ದ ಕಾಂಗ್ರೆಸ್ ಸರ್ಕಾರವು ಮೌನಕ್ಕೆ ಶರಣಾಗಿದೆ.

ಕರ್ನಾಟಕದಲ್ಲಿರುವ ಸರ್ಕಾರಿ ಶಾಲೆಗಳಲ್ಲಿರುವ ಮುಖ್ಯ ಅಡುಗೆ ಸಿಬ್ಬಂದಿಗೆ 3,700 ರೂ ಹಾಗೂ ಅಡುಗೆ ಸಹಾಯಕರಿಗೆ 3,600 ರೂ ಮಾಸಿಕ ವೇತನವಿದೆ. ರಾಜ್ಯ ಸರ್ಕಾರದ ಕನಿಷ್ಠ ವೇತನ 15 ಸಾವಿರ ರೂ ಇದ್ದು, ಬಿಸಿಯೂಟ ನೌಕರರಿಗೆ ಇದು ಮರೀಚಿಕೆಯಾಗಿದೆ.

ಅಡುಗೆ ಮಾಡುವ ವೇಳೆ ಗ್ಯಾಸ್ ಸಿಲಿಂಡರ್, ಕುಕ್ಕರ್ ಸ್ಫೋಟ, ಕೈ-ಕಾಲಿಗೆ ಗಾಯದಂತಹ ದುರ್ಘಟನೆ ಸಂಭವಿಸಿದರೆ ಸಂತ್ರಸ್ತರಿಗೆ ಸರ್ಕಾರವು 10 ಸಾವಿರ ರೂ. ಪರಿಹಾರ ಮೀಸಲಿಟ್ಟಿದೆ. ಶಾಲಾ ಮುಖ್ಯೋಪಾಧ್ಯಾಯರು ಈ ಬಗ್ಗೆ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸಿದರ ಆ ದಾಖಲೆ ಆಧಾರದ ಮೇಲೆ ಪರಿಹಾರ ಸಿಗುತ್ತದೆ. ಆದರೆ, ಶೇ.95 ರಷ್ಟು ಪ್ರಕರಣಗಳಲ್ಲಿ ಇದು ಸಂತ್ರಸ್ತರ ಕೈ ಸೇರುವುದೇ ಇಲ್ಲ. ಆದ್ದರಿಂದ ಬಿಸಿಯೂಟ ನೌಕರರ ಕುಟುಂಬದ ಹಿತದೃಷ್ಟಿಯಿಂದ ವೇತನವನ್ನು ಹೆಚ್ಚಿಸಲು ಕ್ರಮಕೈಗೊಳ್ಳಲು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಮಂತ್ರಿಗಳನ್ನು ಶೂನ್ಯವೇಳೆಯಲ್ಲಿ ಒತ್ತಾಯಿಸುತ್ತೇನೆ.

ಉತ್ತರ:

ಮಧ್ಯಾಹ್ನ ಉಪಹಾರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮಹತ್ವಾಕಾಂಕ್ಷೆಯ ಯೋಜನೆಯಾಗಿರುತ್ತದೆ. ಸದರಿ ಯೋಜನೆಯಡಿ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ತರಗತಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟವನ್ನು ನೀಡಲಾಗುತ್ತದೆ. 1 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ ಸಂಬಂಧಿಸಿದ ಮಧ್ಯಾಹ್ನದ ಉಪಹಾರ ಯೋಜನೆಯ ವೆಚ್ಚಗಳನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ 60:40 ಅನುಪಾತದಲ್ಲಿ ಭರಿಸಲಾಗುತ್ತಿದ್ದು, 9-10ನೇ ತರಗತಿ ವಿದ್ಯಾರ್ಥಿಗಳಿಗೆ ಸಂಬಂಧಿಸಿದ ಮಧ್ಯಾಹ್ನದ ಉಪಹಾರ ಯೋಜನೆಯ ಸಂಪೂರ್ಣವಾಗಿ ರಾಜ್ಯ ಸರ್ಕಾರದಿಂದ ಭರಿಸಲಾಗುತ್ತಿದೆ.

ರಾಜ್ಯ ಸರ್ಕಾರದಿಂದ ಆರ್ಥಿಕ ಸ್ಥಿತಿಗತಿಗಳಿಗೆ ಅನುಗುಣವಾಗಿ ಕಾಲಕಾಲಕ್ಕೆ ಅಡುಗೆ ಸಿಬ್ಬಂದಿಗಳ ಗೌರವ ಸಂಭಾವನೆಯನ್ನು ಹೆಚ್ಚಿಸಲಾಗಿದೆ. ಅದರಂತೆ ಪ್ರಸ್ತುತ ಮುಖ್ಯ ಅಡುಗೆಯವರಿಗೆ ಮಾಸಿಕವಾಗಿ ರೂ 3700/- ಮತ್ತು ಸಹಾಯಕ ಅಡುಗೆಯವರಿಗೆ ರೂ 3600/- ಗೌರವ ಸಂಭಾವನೆಯನ್ನು ಪಾವತಿಸಲಾಗುತ್ತಿದೆ.

| ಸಿಬ್ಬಂದಿ ವಿವರ | ಮಾಸಿಕ ಸಂಭಾವನೆಯ ಕೇಂದ್ರದ ಪಾಲು (60%) | ಮಾಸಿಕ ಸಂಭಾವನೆಯ ರಾಜ್ಯದ ಪಾಲು (40%) | ರಾಜ್ಯ ದಿಂದ ನೀಡಲಾಗುತ್ತಿರುವ ಹೆಚ್ಚುವರಿ ಮಾಸಿಕ ಸಂಭಾವನೆಯ ಮೊತ್ತ | ಒಟ್ಟು ಮಾಸಿಕ ಸಂಭಾವನೆಯ ಮೊತ್ತ ರೂಪಾಯಿಗಳಲ್ಲಿ |
|---|---|---|---|---|
| ಮುಖ್ಯ ಅಡುಗೆಯವರು | 600/- | 400/- | 2700/- | **3700/-** |
| ಸಹಾಯಕ ಅಡುಗೆಯವರು | 600/- | 400/- | 2600/- | **3600/-** |

ಮಧ್ಯಾಹ್ನ ಉಪಹಾರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಯೋಜನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಅನುಷ್ಠಾನ ಮಾಡಲಾಗುತ್ತಿದೆ. ಮಧ್ಯಾಹ್ನ ಉಪಹಾರ ಯೋಜನೆಯಡಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಡುಗೆ ಸಹಾಯಕರು ಶಾಲೆಗಳಲ್ಲಿ ಕರಾರಿನ ಮೇರಗೆ ದಿನವೊಂದರಲ್ಲಿ ಅಲ್ಪಾವಧಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಕನಿಷ್ಠ ವೇತನ ಕಾಯ್ದೆ ಮತ್ತು ನಿಯಮಗಳನ್ವಯ ದಿನವೊಂದರಲ್ಲಿ ನಿಗದಿಪಡಿಸಲಾಗಿರುವ ಅವಧಿಗೆ ಕರ್ತವ್ಯವನ್ನು ನಿರ್ವಹಿಸಿರುವುದಿಲ್ಲ.

ಕರ್ನಾಟಕ ಕನಿಷ್ಠ ವೇತನ ನಿಯಮಗಳು–1958ರಲ್ಲಿ ನಿಗದಿಪಡಿಸಿರುವಂತೆ ವಯಸ್ಕರು ಒಂದು ದಿನದಲ್ಲಿ 09 ಗಂಟೆಗಳ ಕಾಲ ಕೆಲಸ ನಿರ್ವಹಿಸಿದಲ್ಲಿ ಒಂದು ದಿನದ ಕರ್ತವ್ಯ ನಿರ್ವಹಿಸಿದಂತಾಗುತ್ತದೆ. ಆದರೆ ಅಡುಗೆ ಸಹಾಯಕರು ಶಾಲೆಗಳಲ್ಲಿ ಒಂದು ದಿನಕ್ಕೆ 09 ಗಂಟೆಗಳ ಕಾಲ ಕರ್ತವ್ಯ ನಿರ್ವಹಿಸದ ಕಾರಣ ಕನಿಷ್ಠ ವೇತನ ಕಾಯ್ದೆಯ ವ್ಯಾಪ್ತಿಗೆ ಒಳಪಡುವುದಿಲ್ಲ.

ಗೌರವಾನ್ವಿತ ರಾಜ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 6926/2018ರಲ್ಲಿ ದಿನಾಂಕ: 10–08–2022ರಂದು ನೀಡಿರುವ ತೀರ್ಪಿನಲ್ಲಿ ಕರ್ನಾಟಕ ಕನಿಷ್ಠ ವೇತನ ನಿಯಮಗಳು–1958 ರನ್ವಯ ದಿನವೊಂದರ ಸೇವೆಯನ್ನು ಪರಿಗಣಿಸಲು ವಯಸ್ಕರಿಗೆ ನಿಗದಿಪಡಿಸಲಾಗಿರುವ 09 ಗಂಟೆಗಳ ಕೆಲಸದ ಅವಧಿಯ ಮಾನದಂಡವನ್ನು ಅಡುಗೆ ಸಹಾಯಕರು ಪೂರೈಸದ ಕಾರಣ ಕನಿಷ್ಠ ವೇತನ ಕಾಯ್ದೆಯ ವ್ಯಾಪ್ತಿಗೆ ಒಳಪಡುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ.

ಅಡುಗೆ ಸಿಬ್ಬಂದಿಗಳು ಶಾಲೆಗಳಲ್ಲಿ ಅಡುಗೆ ಕರ್ತವ್ಯ ನಿರ್ವಹಿಸುವ ಅವಧಿಯಲ್ಲಿ ಅಪಘಾತ/ ಅವಘಡಗಳ ಸಂಭವಿಸಿ ಸುಟ್ಟಗಾಯವಾಗಿ ಆಸ್ಪತ್ರೆಗಳಿಗೆ ದಾಖಲಾದ ಸಂದರ್ಭಗಳಲ್ಲಿ ಆಸ್ಪತ್ರೆ ವೆಚ್ಚಗಳನ್ನು ಭರಿಸಲು ರೂ 30,000/- ಗಳ ಪರಿಹಾರ ಮೊತ್ತವನ್ನು ನೀಡಲಾಗುತ್ತದೆ ಹಾಗೂ ಒಂದು ವೇಳೆ ಸದರಿ ಅಪಘಾತ/ ಅವಘಡಗಳಿಂದ ಅಡುಗೆ ಸಿಬ್ಬಂದಿಗಳಿಗೆ ಶಾಶ್ವತ ಅಂಗವಿಕಲತೆ ಉಂಟಾದಲ್ಲಿ ರೂ 75,000/- ಈ ಪರಿಹಾರದ ಮೊತ್ತವನ್ನು ನೀಡಲಾಗುತ್ತದೆ. ಈ ಎರಡು ಸಂದರ್ಭಗಳಲ್ಲಿ ಪರಿಹಾರ ಪ್ರಥಮ ಮಾಹಿತಿ ವರದಿಯನ್ನು (FIR) ದಾಖಲಿಸುವ ಅಗತ್ಯವಿರುವುದಿಲ್ಲ.

ಒಂದು ವೇಳೆ ಅಡುಗೆ ಸಿಬ್ಬಂದಿಗಳು ಶಾಲೆಗಳಲ್ಲಿ ಅಡುಗೆ ಕರ್ತವ್ಯ ನಿರ್ವಹಿಸುವ ಅವಧಿಯಲ್ಲಿ ಅಪಘಾತ/ ಅವಘಡಗಳ ಸಂಭವಿಸಿ ಸುಟ್ಟಗಾಯವಾಗಿ ಮರಣ ಹೊಂದಿದರೆ ರೂ 1,00,000/-ಗಳ ಪರಿಹಾರ ಮೊತ್ತವನ್ನು ನೀಡಲಾಗುತ್ತದೆ. ಅಡುಗೆ ಸಿಬ್ಬಂದಿಗಳು ಸುಟ್ಟಗಾಯವಾಗಿ ಮರಣ ಹೊಂದಿದ ಸಂದರ್ಭಗಳಲ್ಲಿ ಮಾತ್ರ ಪರಿಹಾರ ನೀಡವ ಪೂರ್ವದಲ್ಲಿ ಸ್ಥಳೀಯ ಆರಕ್ಷರ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಿ ಪ್ರಥಮ ಮಾಹಿತಿ ವರದಿಯನ್ನು (FIR) ಪಡೆದು ಪರಿಹಾರದ ಮೊತ್ತವನ್ನು ನೀಡಲು ಆದೇಶಿಸಲಾಗಿದ್ದು. ಉಳಿಕ ಸಂದರ್ಭಗಳಲ್ಲಿ ಸುಟ್ಟ ಗಾಯವಾಗಿ ಆಸ್ಪತ್ರೆ ವೆಚ್ಚಗಳನ್ನು ಭರಿಸಲು ಮತ್ತು ಶಾಶ್ವತ ಅಂಗವಿಕಲತೆ ಉಂಟಾದಲ್ಲಿ ಪರಿಹಾರ ನೀಡಲು ಪ್ರಥಮ ಮಾಹಿತಿ ವರದಿಯ ಅಗತ್ಯತೆ ಇರುವುದಿಲ್ಲ.

**ಸಂಖ್ಯೆ : ಇಪಿ 29 ಎಂಎಂಎಸ್ 2023**

**(ಎಸ್.ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು